# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 856 (1059)
ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 14/12/2023.
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಲೋಕಸೇವಾ ಆಯೋಗ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಪ್ರಕಟಿಸಿರುವ ಅಧಿಸೂಚನೆಗಳೆಷ್ಟು; ಅಧಿಸೂಚನೆ ಪ್ರಕಟಿಸಿದ ದಿನಾಂಕದ ಸಹಿತ ಅಧಿಸೂಚನೆವಾರು ಹುದ್ದೆಗಳ ವಿವರ ನೀಡುವುದು. | ಕರ್ನಾಟಕ ಲೋಕಸೇವಾ ಆಯೋಗದಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ಒಟ್ಟು 30 ಅಧಿಸೂಚನೆಗಳನ್ನು ಪ್ರಕಟಿಸಲಾಗಿದೆ.<br><br>(ಅಧಿಸೂಚನೆವಾರು ಹುದ್ದೆಗಳ ವಿವರಗಳನ್ನೊಳಗೊಂಡ ತಃಖ್ತೆಯನ್ನು ಅನುಬಂಧದಲ್ಲಿ ಲಗತ್ತಿಸಿದೆ). |
| ಆ | ಅಧಿಸೂಚನೆಯಲ್ಲಿ ಪ್ರಸ್ತಾಪಿತ ಹುದ್ದೆಗಳಿಗೆ ಅರ್ಜಿಗಳ ಸ್ವೀಕೃತಿ ಪೂರ್ಣಗೊಂಡು ಲಿಖಿತ ಪರೀಕ್ಷೆ ಆಗಿ ಮೌಖಿಕ ಸಂದರ್ಶನ ನಡೆದಿವೆಯೇ; ಲಿಖಿತ ಪರೀಕ್ಷೆ ಪೂರ್ಣಗೊಂಡು<br>ಮೌಖಿಕ ಸಂದರ್ಶನಕ್ಕೆ ಬಾಕಿ ಇರುವ ಮತ್ತು ಲಿಖಿತ ಪರೀಕ್ಷೆ ಇನ್ನೂ ನಡೆಯದ ಹುದ್ದೆಗಳ ವಿವರ ನೀಡುವುದು; | 1. ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚಿಸಲಾದ ಹುದ್ದೆಗಳ ಪೈಕಿ 1772 ಹುದ್ದೆಗಳಿಗೆ ಲಿಖಿತ ಪರೀಕ್ಷೆ/ ಮೌಖಿಕ ಸಂದರ್ಶನವನ್ನು ನಡೆಸಲಾಗಿರುತ್ತದೆ.<br>2. ಲಿಖಿತ ಪರೀಕ್ಷೆ ಪೂರ್ಣಗೊಂಡು ಮೌಖಿಕ ಸಂದರ್ಶನಕ್ಕೆ ಬಾಕಿ ಇರುವ ಹುದ್ದೆಗಳು ಯಾವುದೂ ಇರುವುದಿಲ್ಲ.<br>3. 366 ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ನಡೆಸುವುದು ಬಾಕಿ ಇರುತ್ತದೆ.<br><br>(ವಿವರಗಳನ್ನು ಅನುಬಂಧದಲ್ಲಿ ನೀಡಿದೆ) |
| ಇ | ಕೆ.ಪಿ.ಎಸ್.ಸಿಯಲ್ಲಿ ನೇಮಕ ಪ್ರಕ್ರಿಯೆ ತ್ವರಿತಗತಿಯಲ್ಲಿ ನಡೆಯದ ಕುರಿತು ದೂರುಗಳಿರುವುದು ಸರ್ಕಾರದ ಗಮನದಲ್ಲಿದೆಯೇ; ತ್ವರಿತ ಗತಿಯಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಗಮನಕ್ಕೆ ಬಂದಿದೆ.<br><br>ವಿಳಂಬವನ್ನು ತಡೆಗಟ್ಟುವ ನಿಟ್ಟಿನಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕರ್ನಾಟಕ ಲೋಕಸೇವಾ ಆಯೋಗದ ಅಧಿಕಾರಿ /ನೌಕರರು ನಿಗದಿತ ಕಛೇರಿ ವೇಳೆಯ ಮುನ್ನ ಮತ್ತು ನಂತರ |

| | | |
|---|---|---|
| | | ಹಾಗೂ ಸಾರ್ವತ್ರಿಕ ರಜಾ ದಿನಗಳಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುತ್ತಾರೆ. ಅಲ್ಲದೇ ನೇಮಕಾತಿ ಪ್ರಕ್ರಿಯೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಸರ್ಕಾರದಿಂದ ಆಯೋಗಕ್ಕೆ ನಿರ್ದೇಶನಗಳನ್ನು ನೀಡಲಾಗಿರುತ್ತದೆ. |
| ಈ | ನೇಮಕ ಪ್ರಕ್ರಿಯೆ ಪೂರ್ಣಗೊಂಡು, ಅನುಮೋದನೆಗೆ ಬಾಕಿ ಇರುವ ಕಡತಗಳೆಷ್ಟು; ಅನುಮೋದನೆಗೊಳ್ಳದಿರಲು ಕಾರಣಗಳೇನು; ಕಡತಗಳ ಅನುಮೋದನೆ ವಿಚಾರದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ನೇಮಕ ಪ್ರಕ್ರಿಯೆ ಪೂರ್ಣಗೊಂಡು ಆಯೋಗದಲ್ಲಿ ಅನುಮೋದನೆಗೆ ಬಾಕಿ ಇರುವ ಕಡತಗಳು ಯಾವುದೂ ಇರುವುದಿಲ್ಲ. |

**ಸಂಖ್ಯೆ.ಸಿಆಸುಇ 230 ಎಸ್‌ಎಲ್‌ಎ 2023**

**( ಸಿದ್ದರಾಮಯ್ಯ)**
**ಮುಖ್ಯಮಂತ್ರಿ**